ನಾನಾ ತರಬೇತಿ | ಮಕ್ಕಳಿಗೆ ಗುತ್ತಿಗೆ ಆಧಾರದ ಮೇಲೆ ಕೆಲಸ | ಜಮಖಂಡಿ, ಮುಧೋಳದಲ್ಲೇ ಹೆಚ್ಚು

# ದೇವದಾಸಿ ಮಕ್ಕಳಿಗೆ ಜಿಪಂ ಸಿಇಒ ಸ್ವಾವಲಂಬಿ ಬದುಕಿನ ಪಾಠ

**ರಾಘವೇಂದ್ರ ಕಲಾದಗಿ** ಬಾಗಲಕೋಟೆ

ಜಿಲ್ಲೆಯ ದೇವದಾಸಿ ಮಕ್ಕಳ ಸ್ವಾವಲಂಬಿ ಬದುಕಿಗೆ ಇಲ್ಲಿನ ಜಿಲ್ಲಾ ಪಂಚಾಯತ್ ಸಿಇಒ ಗಂಗೂಬಾಯಿ ಮಾನಕರ ಆಶಾಕಿರಣವಾಗಿ ಅವರ ಮಕ್ಕಳಿಗೆ ಸ್ವಾವಲಂಬಿ ಬದುಕಿನ ಪಾಠ ಮಾಡುತ್ತಿರುವುದು ರಾಜ್ಯದಲ್ಲೇ ಮಾದರಿಯಾಗಿ ಗಮನ ಸೆಳೆದಿದೆ.

ಗ್ರಾಮೀಣ ಪ್ರದೇಶದ ಸೀಮಿತ ಕುಟುಂಬದ ಬಳುವಳಿಯಾಗಿ ತಲ ತಲಾಂತರದಿಂದ ವಂಶ ಪರಂಪರೆಯ ಕಟ್ಟುಪಾಡಿಗೆ ಬಿದ್ದು ಸಾಮಾಜಿಕ ಅನಿಷ್ಠ ಪದ್ಧತಿಗೆ ಒಗ್ಗಿದವರ ಬದುಕು ಬದಲಾವಣೆಗಾಗಿ ಸರಕಾರಿ ಸವಲತ್ತುಗಳ್ನು ನೀಡುವ ಮೂಲಕ ಪರಿವರ್ತನೆಯ ಗಾಳಿ ಬೀಸಿದ್ದಾರೆ.

ರಾಜ್ಯದ ಬಳ್ಳಾರಿ, ರಾಯಚೂರು, ಕೊಪ್ಪಳ, ಬೆಳಗಾವಿ, ಬಾಗಲಕೋಟೆ ಜಿಲ್ಲೆಗಳಲ್ಲಿ ದೇವದಾಸಿ ಪದ್ಧತಿ ಇನ್ನೂ ಹಸಿರಾಗಿದೆ. ರಾಜ್ಯದಲ್ಲೆ ಬಾಗಲಕೋಟೆ ಮೂರನೇ ಸ್ಥಾನದಲ್ಲಿದ್ದು ಕುಟುಂಬಕ್ಕೆ ತಟ್ಟಿರುವ ಶಾಪ ಮುಕ್ತಿಗಾಗಿ ಕಾರ್ಯವು ಮನಮಿಡಿಯುತ್ತಿದೆ. ಜಿಲ್ಲೆಯ ಜಮಖಂಡಿ, ಮುಧೋಳ, ಬೀಳಗಿ, ಬಾದಾಮಿ ತಾಲೂಕಿನ ದೇವದಾಸಿಯರ ಮಕ್ಕಳನ್ನು ಸಮಾಜ ಲಘುವಾಗಿ ಕಾಣುವುದು ಸಹಜ. ಇದರ ಶಾಪ ವಿಮೋಚನೆಗೆ ಶೈಕ್ಷಣಿಕ ದಾರಿಯೊಂದೇ ಮದ್ದು. ಇದನ್ನು ಮುಂದುವರಿಸಿರುವ ಕುಟುಂಬಗಳು ಸಾಮಾಜಿಕ ಪರವರ್ತನೆಗೆ ನಾಂದಿ ಹಾಡಿ ಸಮಾಜದಲ್ಲಿ ತಲೆ ಎತ್ತಿ ಬದುಕಿಗೆ ಮುನ್ನುಡಿ ಬರೆದಿದ್ದಾರೆ.



ಬಾಗಲಕೋಟೆ ಜಿಲ್ಲಾ ಪಂಚಾಯತಿ ಸಿಇಒ ಗಂಗೂಬಾಯಿ ಮಾನಕರ ದೇವದಾಸಿ ಮಹಿಳೆಗೆ ಉಡಿ ತುಂಬುತ್ತಿರುವುದು. (ಸಾಂದರ್ಭಿಕ ಚಿತ್ರ)

ದೇವದಾಸಿ ಮಕ್ಕಳಿಗೆ ಹೊಲಿಗೆ ಸೇರಿದಂತೆ ವಿವಿಧ ಬಗೆಯ ತರಬೇತಿಗಳನ್ನು ನೀಡಿ ಸರಕಾರದಿಂದ ಒದಗಿಸುವ ಆರ್ಥಿಕ ಸಹಾಯವನ್ನು ಕಲ್ಪಿಸಿ ಬದುಕಿನ ಹೊಸ ಮನ್ವಂತರಕ್ಕೆ ದಾರಿ ತೋರುತ್ತಿರುವದು ಸುತ್ಯಾರ್ಹ. ಕಳೆದ ಒಂದೆರಡು ದಶಕಗಳಿಂದ ದೇವದಾಸಿ ಪದ್ಧತಿ ನಿರ್ಮೂಲನೆಗೆ ಸಾಕಷ್ಟು ಕಾರ್ಯಕ್ರಮಗಳು ನಡೆದರೂ ಜಿಲ್ಲೆಯಲ್ಲೇ ಈ ವ್ಯವಸ್ಥೆಯಿಂದ ಹೊರ ಬಂದಿರಲಿಲ್ಲ. ಆದರೆ ಒಂದು ವರ್ಷದಿಂದ ದೇವದಾಸಿ ಮಕ್ಕಳ ಕಲ್ಯಾಣ, ಸೀಮಂತ ಕಾರ್ಯಕ್ರಮ ಹಮ್ಮಿಕೊಂಡು ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಜಮಖಂಡಿ 2503, ಮುಧೋಳ 2106, ಬೀಳಗಿ 978, ಬಾಗಲಕೋಟೆ 808, ಹುನಗುಂದ 721 ಹಾಗೂ ಬಾದಾಮಿ 711 ದೇವದಾಸಿಯರಿದ್ದು, ಹೆಚ್ಚಾಗಿ ಜಮಖಂಡಿ, ಮುಧೋಳ ತಾಲೂಕುಗಳಲ್ಲಿ ಪರಿವರ್ತನಾ ಕಾರ್ಯ ಮತ್ತಷ್ಟು ಚುರುಕಾಗಬೇಕಿದೆ.

## ನಾಳೆ ದೇವದಾಸಿ ಮಕ್ಕಳ ಸಾಮೂಹಿಕ ವಿವಾಹ

ದೇವದಾಸಿ ತಾಯಿಂದಿರ ಮಕ್ಕಳ ಸಾಮೂಹಿಕ ವಿವಾಹ ತಾಲೂಕಿನ ಗದ್ದನಕೇರಿ ಲಡ್ಡು ಮುತ್ಯಾರ ಮಠದಲ್ಲಿ ಜೂ.13ರಂದು ನಡೆಯಲಿದೆ. ಬಾಗಲಕೋಟೆಯ ಜ್ಯೋತಿ ಜಿಲ್ಲಾ ಮಟ್ಟದ ಮಹಿಳಾ ಅಭಿವೃದ್ಧಿ ಸೇವಾ ಸಂಸ್ಥೆ ತನ್ನ 12ನೇ ವರ್ಷದ ವಾರ್ಷಿಕೋತ್ಸವ ನಿಮಿತ್ತ ಈ ಮಹತ್ವದ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.ಹಿರಿಯೂರು, ಚಿತ್ರದುರ್ಗ ಆದಿಜಾಂಬವ ಮಠದ ಷಡಕ್ಷರಿ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಸಚಿವ ಆರ್.ಬಿ. ತಿಮ್ಮಾಪೂರ ಉದ್ಘಾಟಿಸುವರು. ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ್ ಪುಷ್ಪ ಸಮರ್ಪಣೆ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಂಸದ ಪಿ.ಸಿ. ಗದ್ದಿಗೌಡರ, ಶಾಸಕರಾದ ಗೋವಿಂದ ಕಾರಜೋಳ, ಮುರಗೇಶ ನಿರಾಣಿ, ವೀರಣ್ಣ ಚರಂತಿಮಠ, ದೊಡ್ಡನಗೌಡ ಪಾಟೀಲ್, ಆನಂದ ನ್ಯಾಮಗೌಡ, ಜಿಪಂ ಅಧ್ಯಕ್ಷೆ ಬಾಯಕ್ಕ ಮೇಟಿ, ಜಿಲ್ಲಾಧಿಕಾರಿ ಆರ್. ರಾಮಚಂದ್ರನ್, ಜಿಪಂ ಸಿಇಒ ಗಂಗೂಬಾಯಿ ಮಾನಕರ ಮತ್ತಿತರ ಗಣ್ಯರು ಆಗಮಿಸುವರು.

20 ಜನರಿಗೆ ಉಚಿತವಾಗಿ ಹೊಲಿಗೆ ತರಬೇತಿ ನೀಡಿ ಯಂತ್ರಗಳನ್ನು ನೀಡಿದ್ದಾರೆ.

ಬೀಳಗಿ ತಾಲೂಕಿನ ಗಲಗಲಿಯ ಗ್ರಾಮದ ದೇವದಾಸಿ ತಾಯಿಯ ಮಗಳು ಅಂತರ್‌ಜಾತಿ ಯುವಕನೊಂದಿಗೆ ಮದುವೆಯಾದ ನಿಮಿತ್ತ 5 ಲಕ್ಷ ರು. ಸಹಾಯಧನ ಮತ್ತು ಬೂದಿಹಾಳ ಗ್ರಾಮದ ಯುವಕ ದೇವದಾಸಿ ಮಗನ ವಿವಾಹವಾಗಿದ್ದಕ್ಕೆ 3 ಲಕ್ಷ ರು. ಸಹಾಯ ಧನ ನೀಡಿದ್ದಾರೆ.

ಇನ್ನು ಲೈಂಗಿಕ ಅಲ್ಪಸಂಖ್ಯಾತರಿಗೂ ಹೊಲಿಗೆ ತರಬೇತಿ ನೀಡಿ, ಯಂತ್ರವನ್ನು ಒದಗಿಸಿದ್ದಾರೆ. ಕಳೆದ ವರ್ಷ ಹೈಕೋರ್ಟ್ ನ್ಯಾಯಾಧೀಶರನ್ನು ಕರೆಸಿ ನವನಗರ ಕಲಾಭವದಲ್ಲಿ ದೇವದಾಸಿ ಮಕ್ಕಳ ಎರಡು ಜೊಡಿ ಮದುವೆ ಮಾಡಿ ರಾಜ್ಯಕ್ಕೆ ಮಾದರಿಯಾಗಿದ್ದು ವಿಶೇಷ.

> ಸಮಾಜದ ಅನಿಷ್ಠ ಪದ್ಧತಿಗೆ ಒಗ್ಗಿ ಬಳುವಳಿಯಾಗಿ ಮುಂದುವರಿಸಿದ ದೇವದಾಸಿ ಪದ್ಧತಿ ನಿರ್ಮೂಲನೆಗೆ ಹಾಗೂ ಅವರ ಮಕ್ಕಳಿಗೆ ಹೊಸ ಬದುಕಿನ ಪಾಠ ಹೇಳುತ್ತ, ಸ್ವಾವಲಂಬಿಯಾಗಿ ಸಮಾಜದಲ್ಲಿ ಬದುಕುಲು ಸಿಇಒ ಗಂಗೂಬಾಯಿ ಮಾನಕರ ಕಾರ್ಯ ಮೆಚ್ಚುವಂತಹದು. ದೇವದಾಸಿ ಮಕ್ಕಳ ಮದುವೆ, ಸೀಮಂತ, ಆರ್ಥಿಕ ಸಹಾಯ ಧನ ಕಲ್ಪಿಸಿದ್ದಾರೆ. ದೇವದಾಸಿ ಮಕ್ಕಳ ಸಮಸ್ಯೆ ಅರಿತು ಪರಿಹಾರಕ್ಕೆ ಸ್ಪಂದಿಸುತ್ತಿರುವದು ಜಿಲ್ಲೆಯಲ್ಲಿ ಹೊಸ ಅಧ್ಯಾಯ ಶುರುವಾದಂತಿದೆ.
>
> **-ಮಹಾದೇವಿ ಮದರಖಂಡಿ,**
> ದೇವದಾಸಿ ಯೋಜನಾ ಕಲ್ಯಾಣಾಧಿಕಾರಿ

## ಸಮಾಚಾರ ಸಣ್ಣದಲ್ಲ

### ಗ್ರಾಮ ವಾಸ್ತವ್ಯಕ್ಕೆ ಶುಭ ಕೋರಿದ ಸಂಸದೆ ಸುಮಲತಾ



**ಮಂಡ್ಯ:**ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರ ಗ್ರಾಮ ವಾಸ್ತವ್ಯ ಕಾರ್ಯ ಕ್ರಮ ಕುರಿತು ನನ್ನ ಪ್ರತಿ ಕ್ರಿಯೆ ಅನಗತ್ಯ. ಗ್ರಾಮ ವಾಸ್ತವ್ಯ ಕುಮಾರಸ್ವಾಮಿ ಅವರ ಕಾರ್ಯ ಕ್ರಮ, ಅದನ್ನು ಮುಂದುವರಿಸಿ ಕೊಂಡು ಹೋಗುವುದಕ್ಕೆ ಶುಭ ಕೋರು ತ್ತೇನೆ ಎಂದು ಸಂಸದೆ ಸುಮಲತಾ ಅಂಬ ರೀಶ್ ಹೇಳಿದರು. ಸುದ್ದಿಗಾರ ರೊಂದಿಗೆ ಮಾತ ನಾಡಿ, ಚುನಾವಣೆ ಸಹಿತ ಯಾವು ದೇ ಸಂದರ್ಭದಲ್ಲೂ ನಾನು ಯಾರ ಬಗ್ಗೆಯೂ ಕೀಳಾಗಿ ಅಥವಾ ಲಘುವಾಗಿ ಮಾತನಾ ಡಿಲ್ಲ. ಈಗಲೂ ಮಾತನಾಡುವ ಗೋಜಿಗೆ ಹೋಗುವು ದಿಲ್ಲ. ಜನರ ಸಮಸ್ಯೆಗಳ ಪರಿಹಾರಕ್ಕೆ ಪಕ್ಷಾತೀತವಾದ ಪ್ರಾಮಾಣಿಕ ಪ್ರಯತ್ನ ಅಗತ್ಯ ಎಂದರು. ಎಲ್ಲೆಡೆ ಬರ, ನೀರಿನ ಸಮಸ್ಯೆ ಆವರಿಸಿದೆ. ಚುನಾವಣೆ ಮುಗಿದಿದ್ದು, ಈಗಲೂ ರಾಜ ಕಾರಣ ಮುಂದು ವರಿಸುವ ಅಗತ್ಯ ವಿಲ್ಲ. ಜನತೆ ನೀಡಿರುವ ಅಧಿಕಾರವನ್ನು ಬಳಸಿ ಕೊಂಡು ಅವರ ಸಮಸ್ಯೆಗಳಿಗೆ ಎಲ್ಲರೂ ಒಗ್ಗೂಡಿ ಕೆಲಸ ಮಾಡಬೇ ಕಾಗುತ್ತದೆ. ಟೀಕಾರೋಪ ಉತ್ತರ ನೀಡುತ್ತಾ ಸಮಯ ಹರಣ ಮಾಡುವುದು ಸರಿಯಲ್ಲ ಎಂದರು.

### ಸುಬ್ಬಯ್ಯ ಶೆಟ್ಟಿಗೆ ಶಾಂತವೇರಿ ಪ್ರಶಸ್ತಿ

**ಬೆಂಗಳೂರು:** ಪ್ರಸಕ್ತ ಸಾಲಿನ 'ಶಾಂತವೇರಿ ಗೋಪಾಲ ಗೌಡ ಪ್ರಶಸ್ತಿ'ಗೆ ಸರಳ, ಮಾಜಿ ಶಾಸಕ ಸುಬ್ಬಯ್ಯ ಶೆಟ್ಟಿ ಅವರು ಆಯ್ಕೆ ಯಾಗಿದ್ದಾರೆ ಎಂದು ಕನ್ನಡ ಜನಶಕ್ತಿ ಕೇಂದ್ರದ ಅಧ್ಯಕ್ಷ ಸಿ.ಕೆ. ರಾಮೇಗೌಡ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಿ. ಶಾಂತವೇರಿ ಗೋಪಾಲಗೌಡ ಜೀವನಾ ದರ್ಶಗಳನ್ನು ಪಾಲಿಸಿಕೊಂಡು , ಕನ್ನಡ ನಾಡು-ನುಡಿ, ಕಲೆ, ಸಾಹಿತ್ಯ, ರಾಜಕೀಯ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಅನುಪಮ ಸೇವೆ ಸಲ್ಲಿಸುತ್ತಿರುವ ಮಹನೀಯರನ್ನು ಗುರುತಿಸಿ ಪ್ರತಿ ವರ್ಷ ಶಾಂತವೇರಿ ಗೋಪಾಲಗೌಡ ಪ್ರಶಸ್ತಿಯನ್ನು ನೀಡುತ್ತಿದ್ದು ಪ್ರಶಸ್ತಿ ಪುರಸ್ಕೃತರಿಗೆ ಕಂಚಿನ ಫಲಕ, ಪ್ರಶಸ್ತಿ ಹಾಗೂ 25 ಸಾವಿರ ರು. ನಗದು ನೀಡಿ ಗೌರವಿಸಲಾಗುವುದು ಎಂದರು.

### ಮುಲಾಯಂ ಅಸ್ವಸ್ಥ ಆಸ್ಪತ್ರೆಗೆ ದಾಖಲು



**ದೆಹಲಿ:** ಸಮಾಜವಾದಿ ಪಕ್ಷದ ಸಂಸ್ಥಾಪಕ ಮುಲಾಯಂ ಸಿಂಗ್ ಯಾದವ್ ಅವರನ್ನು ಅನಾರೋಗ್ಯ ಕಾರಣದಿಂದ ಗುರ್‌ಗಾಂವ್‌ನ ಮೇದಾಂತ ಆಸ್ಪತ್ರೆಗೆ ಸೋಮವಾರ ತಡ ರಾತ್ರಿ ದಾಖಲಿಸಲಾಗಿದೆ. ಇದಕ್ಕೂ ಮುನ್ನ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಲಖನೌದಲ್ಲಿರುವ ಮುಲಾಯಂ ಅವರ ನಿವಾಸಕ್ಕೆ ತೆರಳಿ ಅವರ ಆರೋಗ್ಯ ವಿಚಾರಿಸಿದರು. 79 ವರ್ಷದ ಮುಲಾಯಂ ಅವರಿಗೆ ಮಧುಮೇಹ ತೀವ್ರ ಗೊಂಡ ಕಾರಣ ದೈನಂದಿನ ತಪಾಸಣೆಗಾಗಿ ಭಾನುವಾರ ಲಖನೌನ ರಾಮ ಮನೋಹರ ವೈದ್ಯಕೀಯ ವಿಜ್ಞಾನ ಸಂಸ್ಥೆಗೆ ದಾಖಲಾಗಿದ್ದರು. ಕೆಲವೇ ಗಂಟೆಗಳ ನಂತರ ಆಸ್ಪತ್ರೆಯಿಂದ ಡಿಸ್‌ಚಾರ್ಜ್ ಆಗಿದ್ದರು ಎಂದು ಸಮಾಜವಾದಿ ಪಕ್ಷದ ವಕ್ತಾರರು ತಿಳಿಸಿದ್ದಾರೆ.

### ದೂರದರ್ಶನ ಕೇಂದ್ರದಲ್ಲಿ ಬೆಂಕಿ

**ಮಥುರಾ:** ಇಲ್ಲಿನ ದೂರದರ್ಶನ ಕೇಂದ್ರದಲ್ಲಿ ಮಂಗಳವಾರ ಬೆಳಗ್ಗೆ ಬೆಂಕಿ ಅವಘಡ ಸಂಭವಿಸಿದೆ. ಇದರಿಂದಾಗಿ ಲಕ್ಷಾಂತರ ರೂಪಾಯಿ ವಸ್ತುಗಳು ಸುಟ್ಟು ಹಾನಿಯಾಗಿವೆ ಎಂದು ಹೇಳಲಾಗಿದೆ. ವೃಂದಾವನ ರಸ್ತೆಯಲ್ಲಿರುವ ದೂರದರ್ಶನ ಕೇಂದ್ರದ ಭದ್ರತಾ ಸಿಬ್ಬಂದಿಗೆ ಬೆಳಗಿನ ಜಾವ 4 ಗಂಟೆಯ ಸುಮಾರಿಗೆ ಬೆಂಕಿ ಕಾಣಿಸಿಕೊಂಡಿದೆ ಎಂದು ಮೂಲಗಳು ತಿಳಿಸಿವೆ.

ಎಸ್‌ಡಿಎಂ ಪ್ರಕೃತಿ ಚಿಕಿತ್ಸಾ ಮತ್ತು ಯೋಗ ವಿಜ್ಞಾನ ಕಾಲೇಜು-25ನೇ ಪದವಿ ಪ್ರದಾನ ಸಮಾರಂಭ

# ಆರೋಗ್ಯ ರಕ್ಷಣೆಗೆ ಸಮಗ್ರ ಚಿಕಿತ್ಸಾ ವಿಧಾನ ಬಳಸಿ

**ವಿಶ್ವವಾಣಿ ಸುದ್ದಿಮನೆ** ಉಜಿರೆ

ರೋಗಿಗಳ ಆರೋಗ್ಯ ಭಾಗ್ಯ ರಕ್ಷಣೆಗಾಗಿ ವಿವೇಚನೆಯಿಂದ ವೈದ್ಯರು ಅಲೋಪತಿ ಹಾಗೂ ಪಾರಂಪರಿಕ ಚಿಕಿತ್ಸಾ ವಿಧಾನವನ್ನು ಬಳಸಬೇಕು ಎಂದು ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆಯ (ನಿಮ್ಹಾನ್ಸ್) ನಿರ್ದೇಶಕ ಡಾ. ಬಿ. ಎನ್. ಗಂಗಾಧರ್ ಹೇಳಿದರು.

ಉಜಿರೆಯಲ್ಲಿ ಎಸ್‌ಡಿಎಂ ಪ್ರಕೃತಿ ಚಿಕಿತ್ಸಾ ಮತ್ತು ಯೋಗ ವಿಜ್ಞಾನ ಕಾಲೇಜಿನಲ್ಲಿ ಮಂಗಳವಾರ ಇಪ್ಪತ್ತೈದನೆ ಪದವಿ ಪ್ರದಾನ ಸಮಾರಂಭದಲ್ಲಿ ಮಾತನಾಡಿ, ರೋಗಿಗಳಿಗೆ ಸಾಂತ್ವನದ ಮಾತುಗಳೊಂದಿಗೆ ಧೈರ್ಯ ಮತ್ತು ಆತ್ಮವಿಶ್ವಾಸ ತುಂಬಿ ಅವರ ಭಯ, ಆತಂಕ ನಿವಾರಿಸಿ ರೋಗವನ್ನು ಶಮನ ಮಾಡಿ ಆರೋಗ್ಯ ರಕ್ಷಣೆ ಮಾಡುವುದು ವೈದ್ಯರ ಕರ್ತವ್ಯ ಮತ್ತು ಹೊಣೆಗಾರಿಕೆಯಾಗಿದೆ. ವೈದ್ಯ ವೃತ್ತಿ ಹಣ ಸಂಪಾದನೆಗಾಗಿ ಅಲ್ಲ, ಮಾನವೀಯತೆಯಿಂದ ಸೇವೆ ಮಾಡಲಿಕ್ಕಾಗಿ ಎಂದು ಹೇಳಿದರು.

ಕೇವಲ ಅಲೋಪತಿಯಿಂದ ಅಥವಾ ಪಾರಂಪರಿಕ ಪದ್ಧತಿಗಳಾದ ಆಯುರ್ವೇದ, ಯುನಾನಿ, ಯೋಗ, ಪ್ರಕೃತಿ ಚಿಕಿತ್ಸೆ, ಹೋಮಿಯೋಪತಿ ಚಿಕಿತ್ಸಾ ವಿಧಾನದಿಂದ ಎಲ್ಲ ರೋಗಗಳನ್ನು ಗುಣ ಪಡಿಸಲು ಸಾಧ್ಯವಿಲ್ಲ. ಆದುದರಿಂದ ವೈದ್ಯರು ವಿವೇಚನೆಯಿಂದ ರೋಗಿ ಮತ್ತು ರೋಗದ ಲಕ್ಷಣ ಹೊಂದಿಕೊಂಡು ಎಲ್ಲ ಪದ್ಧತಿಗಳ ಉತ್ತಮ ಅಂಶಗಳನ್ನು ಬಳಸಿ ಸಮಗ್ರ ಚಿಕಿತ್ಸಾ ವಿಧಾನದಿಂದ ರೋಗಿಗಳ ಸೇವೆ ಮಾಡಬೇಕು. ಬೆಂಗಳೂರಿನ ನಿಮ್ಹಾನ್ಸ್‌ನಲ್ಲಿ, ದೆಹಲಿಯ ಪ್ರತಿಷ್ಠಿತ ಆಸ್ಪತ್ರೆಗಳಲ್ಲಿ ಹಾಗೂ ವಿದೇಶಗಳಲ್ಲಿರುವ ಆಸ್ಪತ್ರೆಗಳಲ್ಲಿ ಈಗ ಸಮಗ್ರ ಚಿಕಿತ್ಸಾ ಪದ್ಧತಿಯನ್ನು ಬಳಸಲಾಗುತ್ತದೆ. ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿಯೂ ಈ ವಿಧಾನ ಬಳಸಬೇಕು ಎಂದು ಅವರು ಸಲಹೆ ನೀಡಿದರು.



ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆಯ ನಿರ್ದೇಶಕ ಡಾ. ಬಿ.ಎನ್.ಗಂಗಾಧರ್ ಪದವಿ ಪ್ರದಾನ ಮಾಡಿದರು.

ಧರ್ಮಸ್ಥಳದ ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆಯವರ ದಕ್ಷ ನೇತೃತ್ವದಲ್ಲಿ ಉಜಿರೆಯ ಪ್ರಕೃತಿ ಚಿಕಿತ್ಸಾ ಮತ್ತು ಯೋಗ ವಿಜ್ಞಾನ ಕಾಲೇಜಿನ ಸೇವೆ, ಪ್ರಗತಿ ಮತ್ತು ಸಾಧನೆಯನ್ನು ಅವರು ಶ್ಲಾಘಿಸಿ ಅಭಿನಂದಿಸಿದರು.

ಅಧ್ಯಕ್ಷತೆ ವಹಿಸಿದ ಧರ್ಮಸ್ಥಳದ ಧರ್ಮಾಧಿಕಾರಿ ಹಾಗೂ ಧಾರವಾಡದ ಎಸ್‌ಡಿಎಂ ವಿಶ್ವವಿದ್ಯಾಲಯದ ಕುಲಪತಿ ಡಾ.ಡಿ. ವೀರೇಂದ್ರ ಹೆಗ್ಗಡೆಯವರು ಮಾತನಾಡಿ, ವೈದ್ಯರು ರೋಗಿಗಳಲ್ಲಿ ಆತ್ಮವಿಶ್ವಾಸ ಮತ್ತು ಭರವಸೆ ಮೂಡಿಸಿ ಅವರನ್ನು ಗುಣಮುಖರನ್ನಾಗಿ ಮಾಡಬೇಕು. ರೋಗ ಬಂದ ಮೇಲೆ ಶಮನಗೊಳಿಸುವುದಕ್ಕಿಂತ ರೋಗ ಬರದಂತೆ ಸಾಕಷ್ಟು ಎಚ್ಚರಿಕೆ ವಹಿಸಬೇಕು. ಅದಕ್ಕಾಗಿ ವೈದ್ಯರು ಸರಿಯಾದ ಆಹಾರ ಕ್ರಮ, ಜೀವನ ಶೈಲಿ, ಆರೋಗ್ಯಪೂರ್ಣ ಶಿಸ್ತಿನ ಜೀವನದ ಬಗ್ಯೆ ಮಾರ್ಗದರ್ಶನ, ಸಲಹೆ ನೀಡಬೇಕು. ರೋಗಿಗಳ ಸಮಸ್ಯೆ, ಆತಂಕವನ್ನು ತಾಳ್ಮೆಯಿಂದ, ಮಾನವೀಯತೆಯಿಂದ ಆಲಿಸಬೇಕು. ತಮ್ಮ ಪವಿತ್ರ ವೃತ್ತಿಯಲ್ಲಿ ಪ್ರತಿ ದಿನ ರೋಗಿಗಳಿಂದ ಹೊಸ ವಿಚಾರ, ಸಮಸ್ಯೆಗಳನ್ನು ತಿಳಿದುಕೊಂಡು ತಮ್ಮ ಜ್ಞಾನ ಕ್ಷಿತಿಜ ಹಾಗೂ ವೃತ್ತಿ ದಕ್ಷತೆಯನ್ನು ಹೆಚ್ಚಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಧಾರವಾಡದಲ್ಲಿ ಡೆಂಟಲ್ ಕಾಲೇಜು ಮತ್ತು ಆಸ್ಪತ್ರೆ, ವೈದ್ಯಕೀಯ ಕಾಲೇಜು, ನರ್ಸಿಂಗ್ ಕಾಲೇಜು ಮತ್ತು ಸಂಶೋಧನಾ ಕೇಂದ್ರವನ್ನು ಸೇರಿಸಿಕೊಂಡು ಎಸ್.ಡಿ.ಎಂ. ವೈದ್ಯಕೀಯ ವಿಶ್ವವಿದ್ಯಾಲಯ ಪ್ರಾರಂಭಿಸಲಾಗಿದೆ ಮುಂದೆ ಎಲ್ಲಾ ವಿದ್ಯಾಸಂಸ್ಥೆಗಳನ್ನು ವಿಶ್ವವಿದ್ಯಾಲಯಕ್ಕೆ ಸಂಯೋಜನೆ ಮಾಡಲಾಗುವುದು ಎಂದರು. ಹೇಮಾವತಿ ವಿ. ಹೆಗ್ಗಡೆ, ಎಸ್.ಡಿ.ಎಂ. ಶಿಕ್ಷಣ ಸಂಸ್ಥೆಗಳ ಕಾರ್ಯದರ್ಶಿಗಳಾದ ಡಿ. ಹರ್ಷೇಂದ್ರ ಕುಮಾರ್ ಮತ್ತು ಡಾ. ಬಿ. ಯಶೋವರ್ಮ ಇದ್ದರು.

## ಸಿದ್ದು ವಿರುದ್ಧ ಗೌಡರ ದೂರು

**ದೆಹಲಿ:** ಮಾಜಿ ಪ್ರಧಾನಿ ಎಚ್.ಡಿ ದೇವೇಗೌಡರು ಎಐಸಿಸಿ ಅಧ್ಯಕ್ಷ ರಾಹುಲ್ ಗಾಂಧಿ ಅವರನ್ನು ನವದೆಹಲಿಯಲ್ಲಿ ಭೇಟಿಯಾಗಿದ್ದು ಕುತೂಹಲ ಸೃಷ್ಟಿಸಿದೆ.

ದೇವೇಗೌಡ ಅವರು ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿ ರಾಜ್ಯ ಕಾಂಗ್ರೆಸ್ ನ ಕೆಲವು ನಾಯಕರ ಬಗ್ಗೆ ಬೇಸರ ವ್ಯಕ್ತಪಡಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಲೋಕಸಭೆ ಚುನಾವಣೆಯಲ್ಲಿ ಮೈತ್ರಿ ಸರಕಾರದ ಕಳಪೆ ಪ್ರದರ್ಶನಕ್ಕೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಕಾರಣ ಎಂದು ದೇವೇಗೌಡರು ರಾಹುಲ್ ಗಾಂಧಿ ಅವರಿಗೆ ದೂರು ನೀಡಿದ್ದಾರೆ ಎನ್ನಲಾಗಿದೆ. ಸಿದ್ದರಾಮಯ್ಯ ಅವರು ಸರಕಾರ ನಡೆಸಲು ಅಡ್ಡಿಪಡಿಸುತ್ತಿದ್ದಾರೆ ಎಂದು ದೂರಿದ್ದಾರೆ ಎಂದು ಹೇಳಲಾಗಿದೆ.

ಕುಮಾರ ಸ್ವಾಮಿ ಸಚಿವ ಸಂಪುಟದ ನಿರ್ಧಾರಗಳ ಬಗ್ಗೆ ಕೆಲವು ಕಾಂಗ್ರೆಸ್ ನ ಹಿರಿಯ ನಾಯಕರೇ ಟೀಕೆ ಮಾಡುತ್ತಿರುವ ಬಗ್ಗೆಯೂ ಅವರು ಬೇಸರ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ.

## ಪೇದೆಮೇಲೆ ಹಲ್ಲೆ: ಸಂಸದೆ ವಿರುದ್ಧ ದೂರು

**ಲಖೀಮಪುರ:** ಉತ್ತರ ಪ್ರದೇಶದ ದೌರಹಾರ ಲೋಕಸಭಾ ಕ್ಷೇತ್ರದ ಸಂಸದೆ ರೇಖಾ ವರ್ಮಾ, ಕರ್ತವ್ಯನಿರತ ಪೊಲೀಸ್ ಪೇದೆಯ ಕೆನ್ನೆಗೆ ಬಾರಿಸಿದ್ದಾರೆ ಎಂಬ ಆರೋಪದ ಹಿನ್ನಲೆಯಲ್ಲಿ ಪೊಲೀಸ್ ಪೇದೆ ಸಂಸದೆ ವಿರುದ್ಧ ದೂರು ದಾಖಲಿಸಿದ್ದಾರೆ.

ಸಂಸದೆಯಾಗಿ ಆಯ್ಕೆಯಾಗಿರುವ ರೇಖಾ ವರ್ಮಾರಿಗೆ ಭಾನುವಾರ ಮೊಹಮ್ಮದಿ ಪಟ್ಟಣದಲ್ಲಿ ಸನ್ಮಾನ ಸಮಾರಂಭವಿತ್ತು. ಕಾರ್ಯಕ್ರಮದಿಂದ ಹಿಂದಿರುಗುತ್ತಿದ್ದ ರಾತ್ರಿ ಸುಮಾರು 11 ಗಂಟೆಗೆ ಸಂಸದೆ ನನ್ನ ಮೇಲೆ ಹಲ್ಲೆ ನಡೆಸಿ ಜೀವ ಬೆದರಿಕೆ ಹಾಕಿದ್ದಾರೆ ಎಂದು ಪೇದೆ ಶ್ಯಾಮ್ ಸಿಂಗ್ ಆರೋಪಿಸಿದ್ದಾರೆ. ಲಖೀಮಪುರದ ಮೊಹಮ್ಮದಿ ಠಾಣೆಯ ಪೇದೆಯಾಗಿರುವ ಶ್ಯಾಮ್ ಸಿಂಗ್ ಪಟ್ಟಣಕ್ಕೆ ಆಗಮಿಸಿದ್ದ ಸಂಸದೆಗೆ ಭದ್ರತಾ ಸಿಬ್ಬಂದಿಯಾಗಿದ್ದರು. ಸಂಜೆ ಕಾರ್ಯಕ್ರಮ ಮುಗಿಸಿ ಸಂಸದೆಯನ್ನು ತಮ್ಮ ಠಾಣಾ ವ್ಯಾಪ್ತಿಯ ಗಡಿ ಪಾರು ಮಾಡಿ ವಂದನೆ ಸಲ್ಲಿಸಿ ಹಿಂದಿರುಗಿದ್ದರು.

ಕೆಲ ಸಮಯದ ಬಳಿಕ ಫೋನ್ ಕರೆ ಮಾಡಿದ ಸಂಸದೆ ಹಿಂದಿರುಗಿ ಬರುವಂತೆ ಸೂಚಿಸಿದರು. ರೇಖಾ ವರ್ಮಾರ ಆದೇಶದಂತೆ ಹೋದಾಗ ನನ್ನನ್ನು ಕರೆದು ಕಪಾಳಕ್ಕೆ ಬಾರಿಸಿ, ಕೊಲ್ಲುವುದಾಗಿ ಬೆದರಿಕೆ ಹಾಕಿದ್ದಾರೆ ಎಂದು ಶ್ಯಾಮ್ ಸಿಂಗ್ ದೂರಿನಲ್ಲಿ ದಾಖಲಿಸಿದ್ದಾರೆ.

## ಕೊಳವೆ ಬಾವಿಗೆ ಬಿದ್ದ ಮಗು ಸಾವು

**ಸಂಗ್ರೂರ್:** ಕಳದ ಗುರುವಾರ ಪಂಜಾಬಿನ ಭಗವಾನ್‌ಪುರದಲ್ಲಿ 150 ಅಡಿ ಆಳದ ಕೊಳವೆ ಬಾವಿಗೆ ಬಿದ್ದಿದ್ದ ಎರಡು ವರ್ಷದ ಮಗು 110 ಗಂಟೆಗಳ ಸತತ ರಕ್ಷಣಾ ಕಾರ್ಯಾಚರಣೆಯ ನಂತರವೂ ಬದುಕಿ ಉಳಿಯಲಿಲ್ಲ.

ಎಲ್ಲ ಪ್ರಯತ್ನಗಳು ವಿಫಲವಾಗಿ ಮಗುವಿನ ಮೃತದೇಹವನ್ನು ಮಂಗಳವಾರ ಹೊರಕ್ಕೆ ತೆಗೆದು ನಂತರ ಶವ ಪರೀಕ್ಷೆ ನಡೆಸಿ ಕುಟುಂಬದವರ ವಶಕ್ಕೆ ನೀಡಲಾಗಿದೆ.

ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆಯ ಸಿಬ್ಬಂದಿ ರಕ್ಷಣಾ ಕಾರ್ಯಾಚರಣೆ ನಡೆಸಿ ಮುಂಜಾನೆ 5.30ರ ಸುಮಾರಿಗೆ ಫತೇವೀರ್‌ನನ್ನು ಬೋರ್‌ವೆಲ್‌ನಿಂದ ಹೊರತೆಗೆದು ಆಸ್ಪತ್ರೆಗೆ ರವಾನಿಸಿದ್ದರು ಎಂದು ಡೆಪ್ಯುಟಿ ಕಮೀಷನರ್ ಘನಶ್ಯಾಂ ಥೋರಿ ತಿಳಿಸಿದ್ದಾರೆ.

125 ಅಡಿ ಆಳದ ಏಳು ಇಂಚು ಅಗಲವಿದ್ದ ಕೊಳವೆಯಲ್ಲಿ ಮಗು ಸಿಕ್ಕಿಹಾಕಿಕೊಂಡಿತ್ತು. ಪಾಲಕರ ಮುದ್ದಿನ ಏಕೈಕ ಮಗುವಾಗಿದ್ದ ಪತೇವೀರ್ ಭಗವಾನ್ಪುರ ಗ್ರಾಮದಲ್ಲಿ ಬಯಲಿನಲ್ಲಿ ಆಟವಾಡುತ್ತಿದ್ದ ವೇಳೆ ಸಂಜೆ 4 ಗಂಟೆ ಸುಮಾರಿಗೆ ಕೊಳವೆಬಾವಿಗೆ ಬಿದ್ದಿದ್ದ. ಬಟ್ಟೆಯಿಂದ ಮುಚ್ಚಲಾಗಿದ್ದ ಕೊಳವೆ ಬಾವಿಗೆ ಆಕಸ್ಮಿಕವಾಗಿ ಮಗು ಜಾರಿದ್ದ. ಆತನ ರಕ್ಷಣೆಗೆ ತಾಯಿ ಎಷ್ಟೇ ಪ್ರಯತ್ನಿಸಿದರೂ ಕೂಡ ಪ್ರಯೋಜನವಾಗಿರಲಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ನಡುವೆ ಸರಕಾರ ಮಗುವಿನ ರಕ್ಷಣೆ ಮಾಡುವಲ್ಲಿ ಶಕ್ತಿಮೀರಿ ಪ್ರಯತ್ನ ಮಾಡಿದೆ .ಹೀಗಾಗಿ ಯಾರೊಬ್ಬರು ಪ್ರತಿಭಟನೆ ಮಾಡಬಾರದು ಎಂದು ಮಗುವಿನ ತಾತ ಜನತೆಯಲ್ಲಿ ಮನವಿ ಮಾಡಿದ್ದಾರೆ. ದೇಶದಲ್ಲಿ ಪದೆ ಪದೇ ಇಂತಹ ದುರಂತಗಳು ಸಂಭವಿಸುತ್ತಲೇ ಇರುವುದು ನಿಜಕ್ಕೂ ನೋವಿನ ಸಂಗತಿ.



## ಭದ್ರತಾ ಪಡೆಯ ಗುಂಡಿಗೆ ಇಬ್ಬರು ಉಗ್ರರು ಹತ



**ಶ್ರೀನಗರ:** ದಕ್ಷಿಣ ಕಾಶ್ಮೀರದ ಶೋಪಿಯಾನ್ ಜಿಲ್ಲೆಯಲ್ಲಿ ಭದ್ರತಾ ಪಡೆಗಳ ಕಾರ್ಯಾಚರಣೆಯಲ್ಲಿ ಇಬ್ಬರು ಉಗ್ರರು ಮೃತಪಟ್ಟಿದ್ದಾರೆ.

ಶೋಪಿಯಾನ್ ಜಿಲ್ಲೆಯ ಅವನೀರ್ ಗ್ರಾಮದಲ್ಲಿ ಉಗ್ರರಿದ್ದಾರೆ ಎಂಬ ಖಚಿತ ಮಾಹಿತಿ ಮೇರೆಗೆ ಜಂಟಿ ಶೋಧ ಕಾರ್ಯಾಚರಣೆ ನಡೆಸಿದ ಜಮ್ಮು-ಕಾಶ್ಮೀರದ ವಿಶೇಷ ಕಾರ್ಯಾಚರಣೆ ತಂಡ, ಸಿಆರ್‌ಪಿಎಫ್ ಹಾಗೂ ರಾಷ್ಟ್ರೀ ಯ ರೈಫಲ್ಸ್ ಪಡೆಗಳು ಇಬ್ಬರು ಉಗ್ರರನ್ನು ಹತಗೊಳಿಸಿದ್ದಾರೆ.

ಕಾರ್ಯಾ ಚರಣೆ ಸ್ಥಳದಿಂದ ಹೊರ ಹೋಗುವ ಎಲ್ಲಾ ಸ್ಥಳಗಳನ್ನು ಬಂದ್ ಮಾಡಿ ಭದ್ರತಾ ಪಡೆಗಳು ಶೋಧ ಕಾರ್ಯಾ ಚರಣೆ ನಡೆಸಿದ್ದು, ಈ ವೇಳೆ ಉಗ್ರರು ಸ್ವಯಂ ಚಾಲಿತ ಶಸ್ತ್ರಗಳಿಂದ ಗುಂಡಿನ ದಾಳಿ ನಡೆಸಿದ್ದಾರೆ. ಭದ್ರತಾ ಪಡೆಗಳು ಕೂಡ ಪ್ರತಿದಾಳಿ ನಡೆಸಿ ಉಗ್ರರನ್ನು ನಿಗ್ರಹಿಸಿದ್ದಾರೆ.

ಇದುವರೆಗೆ ಇಬ್ಬರು ಉಗ್ರರು ಹತರಾಗಿದ್ದು, ಶೋಧ ಕಾರ್ಯಾಚರಣೆ ಮುಂದುವರೆದಿದೆ.

ಅವನೀರ್ ಪ್ರದೇಶದ ಸುತ್ತಮುತ್ತ ಪ್ರತಿ ಭಟನೆಯನ್ನು ತಡೆಯಲು ಹೆಚ್ಚುವರಿ ಭದ್ರತಾ ಪಡೆಗಳನ್ನು ನಿಯೋಜಿಸಲಾ ಗಿದೆ. ಶೋಧ ಕಾರ್ಯಾಚರಣೆ ಹಿನ್ನೆಲೆ ಯಲ್ಲಿ ಶೋಪಿಯಾನ್ ನಲ್ಲಿ ಎಲ್ಲಾ ಮೊಬೈಲ್ ಸೇವೆಗಳನ್ನು ಸ್ಥಗಿತಗೊಳಿಸ ಲಾಗಿದೆ.

## ಪ್ರಧಾನಿ ಮೋದಿ ಭೇಟಿ ಮಾಡಿದ ಪಟ್ನಾಯಕ್

**ದೆಹಲಿ:** ಒಡಿಶಾ ಮುಖ್ಯಮಂತ್ರಿ ನವೀನ್ ಪಟ್ನಾಯಕ್ ಮಂಗಳವಾರ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

ವಿಶೇಷ ರಾಜ್ಯ ಸ್ಥಾನಮಾನ ಕಲ್ಪಿಸಬೇಕು ಎಂಬುದು ಸೇರಿದಂತೆ ಒಡಿಶಾಗೆ ಸಂಬಂಧಿಸಿದ ಹಲವು ವಿಷಯಗಳ ಬಗ್ಗೆ ಪ್ರಧಾನಿ ಅವರೊಂದಿಗೆ ಚರ್ಚಿಸಿದರು. ಇಬ್ಬರೂ ನಾಯಕರ ಭೇಟಿಯ ಚಿತ್ರವನ್ನು ಪ್ರಧಾನಿ ಕಾರ್ಯಾಲಯ ತನ್ನ ಟ್ವೀಟ್‌ನಲ್ಲಿ ಪ್ರಕಟಿಸಿದೆ.

ಐದನೇ ಬಾರಿ ಒಡಿಶಾ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ನಂತರ ಮೊದಲ ಬಾರಿ ಈ ಸಭೆ ನಡೆದಿದೆ. ದೆಹಲಿ ಭೇಟಿಯ ವೇಳೆ ಪಟ್ನಾಯಕ್, ರಾಷ್ಟ್ರಪತಿ ರಾಮ್‌ನಾಥ್ ಕೋವಿಂದ್ ಹಾಗೂ ಹಲವು ಕೇಂದ್ರ ಸಚಿವರನ್ನು ಭೇಟಿ ಮಾಡಿದರು.

ಒಡಿಶಾ ರಾಜ್ಯಕ್ಕೆ ವಿಶೇಷ ರಾಜ್ಯ ಸ್ಥಾನಮಾನ ಕಲ್ಪಿಸಬೇಕು ಎಂಬುದು ನವೀನ್ ಪಟ್ನಾಯಕ್ ಅವರ ಬಹು ಹಳೆಯ ಬೇಡಿಕೆಯಾಗಿದೆ. ಅಲ್ಲದೆ, ಇತ್ತೀಚಿಗೆ ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಬೀಸಿದ ಫನಿ ಚಂಡಮಾರುತದಿಂದ ಆದ ಹಾನಿ ಯನ್ನೂ ಪ್ರಧಾನಿಗೆ ಮನವರಿಕೆ ಮಾಡಿಕೊಟ್ಟರು.



ಒಡಿಶಾ ಮುಖ್ಯಮಂತ್ರಿ ನವೀನ್ ಪಟ್ನಾಯಕ್ ಮಂಗಳವಾರ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

## ವಿದ್ಯಾಸಾಗರ ಪ್ರತಿಮೆ ಅನಾವರಣ

**ಕೋಲ್ಕತಾ:** ಲೋಕಸಭಾ ಚುನಾವಣೆಯ ಪ್ರಚಾರದ ವೇಳೆ ಅಂದಿನ ಬಿಜೆಪಿ ರಾಷ್ಟ್ರಾಧ್ಯಕ್ಷ ಅಮಿತ್ ಶಾ ಅವರ ರೋಡ್ ಶೋ ವೇಳೆ ಹಾನಿಗೊಳಗಾಗಿದ್ದ ಸಮಾಜ ಸುಧಾರಕ ಈಶ್ವರ್ ಚಂದ್ರ ವಿದ್ಯಾಸಾಗರ್ ಪ್ರತಿಮೆಯನ್ನು ಪುನರ್ ನಿರ್ಮಿಸಲಾಗಿದ್ದು, ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮಂಗಳವಾರ ಅನಾವರಣ ಗೊಳಿಸಿದರು.

ದುಷ್ಕರ್ಮಿಗಳಿಂದ ಧ್ವಂಸಗೊಂಡಿದ್ದ ವಿದ್ಯಾಸಾಗರ ಕಾಲೇಜಿನಲ್ಲಿ ಈಶ್ವರ್ ಚಂದ್ರ ವಿದ್ಯಾಸಾಗರ್ ಪ್ರತಿಮೆಯನ್ನು ಪುನರ್ ಪ್ರತಿಷ್ಠಾಪಿಸಲಾಗುತ್ತಿದೆ. ಮೇ 14ರಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಅಮಿತ್ ಶಾ ಅವರ ಚುನಾವಣಾ ರೋಡ್ ಶೋ ವೇಳೆಯಲ್ಲಿ ಬಿಜೆಪಿ ಹಾಗೂ ತೃಣಮೂಲ ಕಾಂಗ್ರೆಸ್ ಕಾರ್ಯಕರ್ತರ ನಡುವೆ ಸಂಭವಿಸಿದ ಘರ್ಷಣೆ ವೇಳೆಯಲ್ಲಿ 19 ನೇ ಶತಮಾನದ ಸಮಾಜ ಸುಧಾರಕ



ವಿದ್ಯಾಸಾಗರ್ ಅವರ ಪ್ರತಿಮೆಯನ್ನು ಧ್ವಂಸಗೊಳಿಸಲಾಗಿತ್ತು.

ನಂತರ ಮೇ 16ರಂದು ಚುನಾವಣಾ ಪ್ರಚಾರ ಸಭೆಯನ್ನುದ್ದೇಶಿಸಿ ಮಾತನಾಡಿದ ನರೇಂದ್ರ ಮೋದಿ, ಅದೇ ಸ್ಥಳದಲ್ಲಿ ವಿದ್ಯಾಸಾಗರ್ ಅವರ ಹೊಸ ಪ್ರತಿಮೆ ಸ್ಥಾಪಿಸುವ ಭರವಸೆ ನೀಡಿದ್ದರು. ಆದಾಗ್ಯೂ, ಈ ಪ್ರಸ್ತಾವನೆಯನ್ನು ನಿರಾಕರಿಸಿದ್ದ ಮಮತಾ ಬ್ಯಾನರ್ಜಿ ಪ್ರತಿಮೆ ಸ್ಥಾಪಿಸಲು ನಮ್ಮ ಬಳಿಯೇ ಸಾಕಷ್ಟು ಹಣವಿದೆ ಎಂದು ಹೇಳಿಕೆ ನೀಡಿದ್ದರು.

## ಟಿಂಬರ್ ಕಾರ್ಖಾನೆಯಲ್ಲಿ ಬೆಂಕಿ



**ಜಮ್ಮು:** ಇಲ್ಲಿನ ಮರದ ಕಾರ್ಖಾನೆಯಲ್ಲಿ ಮಂಗಳವಾರ ಬೆಳಗ್ಗೆ ಭಾರಿ ಬೆಂಕಿ ಬಿದ್ದು ಭಾರೀ ನಷ್ಟವಾಗಿದೆ. ದಕ್ಷಿಣ ಮತ್ತು ಉತ್ತರ ಭಾಗದಿಂದ ಬಹಳಷ್ಟು ಅಗ್ನಿಶಾಮಕದಳದ ಯಂತ್ರಗಳು ಬೆಂಕಿ ನಂದಿಸಿದವು. ಬೆಂಕಿಯ ಜತೆಗೆ ಗಾಳಿ ವೇಗವಾಗಿ ಬೀಸುತ್ತಿ ರುವ ಕಾರಣ ಬೆಂಕಿ ಹೆಚ್ಚಿನ ವೇಗದಲ್ಲಿ ಇತರ ಪ್ರದೇಶಗಳಿಗೆ ಹಬ್ಬಿದೆ. ಪೊಲೀಸ್ ಸಿಬ್ಬಂದಿ ಸಹ ಬೆಂಕಿ ನಂದಿಸಲು ನೆರವಾಗಿದ್ದು, ಟಿಂಬರ್ ಕಾರ್ಖಾನೆಯಲ್ಲಿನ ಬೆಂಕಿ ಅಕ್ಕಪಕ್ಕದ ಮನೆಯ ಪ್ರದೇ ಶಗಳಿಗೂ ವ್ಯಾಪಿಸಿತ್ತು. ಲಕ್ಷಾಂತರ ರುಪಾಯಿ ಬೆಲೆ ಬಾಳುವ ಆಸ್ತಿ ಪಾಸ್ತಿಗೆ ಹಾನಿಯಾಗಿದೆ.

## ಸಿಎಂ ಕುಮಾರಸ್ವಾಮಿ ವಿರುದ್ಧ ಬಿಜೆಪಿ ಲೇವಡಿ

**ದೆಹಲಿ:** ಮುಳ್ಳನ್ನು ಮುಳ್ಳಿನಿಂದಲೇ ತೆಗೆಯಬೇಕು ಎಂಬ ಗಾದೆ ಮಾತನ್ನು ಬಿಜೆಪಿ ಸರಿಯಾಗಿ ಉಪಯೋಗಿಸಿದೆ.ಉತ್ತರ ಪ್ರದೇಶದಲ್ಲಿ ಪತ್ರಕರ್ತರನ ಬಂಧನವನ್ನು ವಿರೋಧಿಸಿ ಕಾಂಗ್ರೆಸ್ ಅಧ್ಯಕ್ಷ ರಾಹುಲ್ ಗಾಂಧಿ ಮಾಡಿರುವ ಟ್ವೀಟ್ ಅನ್ನು ಕುಮಾರಸ್ವಾಮಿಯವರನ್ನು ಲೇವಡಿ ಮಾಡಲು ಅದು ಉಪಯೋಗಿಸಿದೆ.

ಉತ್ತರಪ್ರದೇಶದ ಪತ್ರಕರ್ತ ಪ್ರಶಾಂತ್ ಕನೋಜಿಯಾ ಹಾಗೂ ನೋಯ್ಡಾ ಮೂಲದ ಟಿವಿ ಚಾನೆಲ್‌ನ ಸಂಪಾದಕರ ಬಂಧನವನ್ನು ರಾಹುಲ್ ಗಾಂಧಿ ಈ ಟ್ವೀಟ್ ಮೂಲಕ ಖಂಡಿಸಿದ್ದರು.ಕುಮಾರಸ್ವಾಮಿ ಅವರು ಈ ವಿಚಾರದಲ್ಲಿ ತಮ್ಮ 'ಗೆಳೆಯ' ರಾಹುಲ್ ಗಾಂಧಿ ಮಾತನ್ನು ಕೇಳಬೇಕು ಎಂದು ಬಿಜೆಪಿ ಹೇಳಿದೆ. ತಮ್ಮ ವಿರುದ್ಧ ಬಿಜೆಪಿ, ಆರೆಸ್ಸೆಸ್ ಪ್ರಾಯೋಜಿತ ಸುಳ್ಳು ಸುದ್ದಿಗಳನ್ನು ಬರೆಯುವ ಎಲ್ಲ ಪತ್ರಕರ್ತರನ್ನು ಜೈಲಿಗೆ ಹಾಕುತ್ತ ಹೋದರೆ ಬಹುತೇಕ ಪತ್ರಿಕೆಗಳು ಹಾಗೂ ಟಿವಿ ಚಾನೆಲ್‌ಗಳು ಸಿಬ್ಬಂದಿ ಕೊರತೆಯನ್ನು ಎದುರಿಸಲಿವೆ ಎಂದು ರಾಹುಲ್ ಹೇಳಿದ್ದರು. ಅವರ ಈ ಹೇಳಿಕೆಯನ್ನು ಬಿಜೆಪಿಯು ಕುಮಾರಸ್ವಾಮಿ ಯವರತ್ತ ತಿರುಗಿಸಿ ಲೇವಡಿ ಮಾಡಿದೆ. ಜತೆಗೆ ರಾಹುಲ್ ಅವರ ಬೂಟಾಟಿಕೆಯನ್ನೂ ಎತ್ತಿ ತೋರಿಸುವ ಪ್ರಯತ್ನ ಮಾಡಿದೆ. ಏಕೆಂದರೆ ಒಂದೆಡೆ ಉತ್ತರಪ್ರದೇಶ ಸರಕಾರವನ್ನು ಟೀಕಿಸುವ ರಾಹುಲ್ ಪತ್ರ ಕರ್ತರ ವಿರುದ್ಧ ಇದೇ ರೀತಿಯ ದಮನ ಕಾರಿ ಕ್ರಮ ಕೈಗೊಳ್ಳುತ್ತಿದ್ದರೂ ಆ ಬಗ್ಗೆ ಚಕಾರ ಎತ್ತದಿ ರುವ ಬಗ್ಗೆ ರಾಹುಲ್ ಅವರ ಕಾಲೆಳೆದಿದೆ.

ಕರ್ನಾಟಕದಲ್ಲಿ ಕುಮಾರಸ್ವಾಮಿ ಸರಕಾರ ಪತ್ರಕರ್ತರ ವಿರುದ್ಧ ಕೈಗೊಂಡಿರುವ ಕ್ರಮಗಳನ್ನು ಪಟ್ಟಿ ಮಾಡಿರುವ ಬಿಜೆಪಿ , 'ಹಾಗಾದರೆ ರಾಹುಲ್ ಗಾಂಧಿಯವರದು ಉತ್ತರ ಪ್ರದೇಶಕ್ಕೆ ಒಂದು ಮತ್ತು ಕರ್ನಾಟಕಕ್ಕೆ ಒಂದು ನ್ಯಾಯವೇ' ಎಂದು ಎಂದು ಪ್ರಶ್ನಿಸಿದೆ. ಮಂಡ್ಯ ಲೋಕಸಭೆ ಕ್ಷೇತ್ರದ ಚುನಾವಣೆ ಸಂದರ್ಭದಲ್ಲಿ ನಿಖಿಲ್ ಕುಮಾರಸ್ವಾಮಿ ಕುರಿತ ವರದಿಗಳಿಂದ ಗರಂ ಆಗಿದ್ದ ಕುಮಾರಸ್ವಾಮಿಯವರು ತಾವು ಮಾಧ್ಯಮಗಳನ್ನು ಬಹಿಷ್ಕರಿಸುವುದಾಗಿ ಹೇಳಿದ್ದರು. ಅಲ್ಲದೆ 'ನಿಖಿಲ್ ರಂಪಾಟ' ಎಂಬ ವಿಶ್ವವಾಣಿ ವರದಿಗೆ ಅಸಹನೆಗೊಂ ಡಿದ್ದರು.

ಪತ್ರಿಕೆಯ ಸಂಪಾದಕ ವಿಶ್ವೇಶ್ವರ ಭಟ್ ವಿರುದ್ಧ ಎಫ್‌ಐಆರ್ ದಾಖ ಲಾಗಿ ತ್ತು.ಈ ಬಗ್ಗೆ ರಾಷ್ಟ್ರಮಟ್ಟದಲ್ಲಿ ಖಂಡನೆ ವ್ಯಕ್ತ ವಾಗಿತ್ತು ಹಾಗೂ ಭಾರಿ ಚರ್ಚೆ ನಡೆದಿತ್ತು. ಇದಕ್ಕೆ ಮುನ್ನ, ದೇವೇಗೌಡರ ಕುಟುಂಬದ ಬಗ್ಗೆ ಅವಹೇಳನಕರ ಪೋಸ್ಟ್ ಮಾಡಿದ ಆರೋಪದಲ್ಲಿ ಇಬ್ಬರನ್ನು ಬಂಧಿಸ ಲಾಗಿತ್ತು. ಇದಾದ ಬಳಿಕವೂ ಅವರು ಮಾಧ್ಯ ಮಗಳ ಮೇಲೆ ಹರಿಹಾಯುವುದನ್ನು ನಿಲ್ಲಿಸಿಲ್ಲ.